ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು.**

ಸಂಖ್ಯೆ:ಸಿ3[1]ಪ್ರಾ.ಶಿ: ಅ.ಶಿ. ನೇ.01/2022-23 ದಿನಾಂಕ 29.04.2022

**ಜ್ಞಾಪನಾ**

ವಿಷಯ:- 2022-23 ನೇ ಸಾಲಿನಲ್ಲಿ ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳಿಗೆ ಎದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ತಾತ್ಕಾಲಿಕವಾಗಿ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳುವ ಬಗ್ಗೆ

ಉಲ್ಲೇಖ:- ಸರ್ಕಾರದ ಆದೇಶ ಸಂಖ್ಯೆ ಇಪಿ 14 ಎಸ್‌ಇಎಸ್ 2022 ದಿನಾಂಕ 27.04.2022

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2022-2023 ನೇ ಶೈಕ್ಷಣಿಕ ಸಾಲಿಗೆ ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳಿಗೆ ಎದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ನೇರ ನೇಮಕಾತಿ ಮೂಲಕ ಹುದ್ದೆ ಭರ್ತಿ ಮಾಡುವವರೆಗೆ ಅಥವಾ ಪ್ರಸ್ತುತ ಶೈಕ್ಷಣಿಕ ಸಾಲಿನ ಅಂತ್ಯದವರೆಗೆ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿನ ಖಾಲಿ ಹುದ್ದೆಗಳಿಗೆ ಎದುರಾಗಿ ತಾತ್ಕಾಲಿಕವಾಗಿ ಒಟ್ಟು-22000 ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲು ಉಲ್ಲೇಖಿತ ಸರ್ಕಾರದ ಆದೇಶದಲ್ಲಿ ಷರತ್ತುಗಳಿಗೆ ಒಳಪಟ್ಟು ಅನುಮತಿ ನೀಡಲಾಗಿದೆ.

ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ವೃಂದ ಬಲ ನಿಗದಿಗೊಳಿಸಿರುವ ದಿನಾಂಕ 02.02.2018 ರ ಇಲಾಖಾ ಅಧಿಸೂಚನೆಯಲ್ಲಿನ ಸೂಚನೆಗಳನ್ನು ಹಾಗೂ 2022-23 ನೇ ಸಾಲಿನಲ್ಲಿ ಅಗತ್ಯತೆ/ಹೆಚ್ಚುವರಿ ಶಿಕ್ಷಕರ ಹುದ್ದೆಗಳ ಗುರ್ತಿಸುವಿಕೆ ಮತ್ತು ಮರು ಹೊಂದಾಣಿಕೆ ಪ್ರಕ್ರಿಯೆ ಸಂಬಂಧ ನೀಡಲಾಗಿರುವ ಹುದ್ದೆ ಹಂಚಿಕೆ ಅನುಬಂಧ-1 ಮತ್ತು ಅನುಬಂಧ-2 ಸೂಚನೆಗಳನ್ನು ಪಾಲಿಸಿ ಪ್ರತಿ ಶಾಲೆಗೆ ಅಗತ್ಯವಿರುವ ಶಿಕ್ಷಕರ ಹುದ್ದೆಗಳ ಕುರಿತಂತೆ, ಶಾಲಾವಾರು ವೃಂದ ಮಂಜೂರಾತಿ ಕ್ರಮಗಳನ್ನು ಈಗಾಗಲೇ ಜಿಲ್ಲಾ ಹಂತದಲ್ಲಿ ನಿಯಮಾನುಸಾರ ಕೈಗೊಳ್ಳಲಾಗಿರುತ್ತದೆ.

ಸದರಿ ಆಧಾರದಲ್ಲಿ, ಎಲ್ಲಿ ಅಗತ್ಯ ಖಾಲಿ ಹುದ್ದೆಗಳಿವೆಯೋ ಅಂತಹ ಖಾಲಿ ಹುದ್ದೆಗಳಲ್ಲಿ ಅತಿಥಿ ಶಿಕ್ಷಕರನ್ನು ಆಯ್ಕೆ ಮಾಡಿಕೊಳ್ಳಲು ಪ್ರಸ್ತುತ ಲಭ್ಯವಿರುವ ಖಾಲಿ ಹುದ್ದೆಗಳ ಮಾಹಿತಿಯಂತೆ ಅತಿಥಿ ಶಿಕ್ಷಕರ ಹುದ್ದೆಗಳನ್ನು ಜಿಲ್ಲಾ ಉಪನಿರ್ದೇಶಕರ ವಿಲೇವಾರಿಯಲ್ಲಿ ಹಂಚಿಕೆ ಮಾಡಲಾಗಿದೆ.

ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲು ಅನುಮತಿ ನೀಡಿದೆ.

1. ಖಾಲಿ ಇರುವ ಅಗತ್ಯ ಹುದ್ದೆಗಳಿಗೆ ಮಾತ್ರ ಆದ್ಯತೆ ಮೇರೆಗೆ ಅತಿಥಿ ಶಿಕ್ಷಕರನ್ನು ತ್ವರಿತವಾಗಿ ನೇಮಕಾತಿ ಮಾಡಲು ಜಿಲ್ಲಾ ಉಪನಿರ್ದೇಶಕರು ತಾಲ್ಲೂಕುವಾರು ಹುದ್ದೆಗಳ ಮರು ಹಂಚಿಕೆಯನ್ನು ದಿನಾಂಕ 05/05/2022 ರ ಒಳಗಾಗಿ ಕಡ್ಡಾಯವಾಗಿ ಮಾಡತಕ್ಕದು, ತಾಲ್ಲೂಕುವಾರು ಹುದ್ದೆಗಳ ಹಂಚಿಕೆ ಆದೇಶದ ಪ್ರತಿಯನ್ನು ಅಂದೇ ಈ ಕಛೇರಿಗೆ ಸಲ್ಲಿಸುವುದು.
2. ಪ್ರಾಥಮಿಕ ಶಾಲೆಗಳಿಗೆ ಸಂಬಂಧಿಸಿದಂತೆ ಅತಿಥಿ ಶಿಕ್ಷಕರ ಆಯ್ಕೆ ಜವಾಬ್ದಾರಿಯನ್ನು ಸಂಬಂಧಿಸಿದ ಸರ್ಕಾರಿ ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕರುಗಳ ಮೂಲಕವೇ ಮಾಡುವುದು.
3. ಪ್ರಾಥಮಿಕ ಶಾಲಾ ಅತಿಥಿ ಶಿಕ್ಷಕರನ್ನು ಪ್ರಮುಖವಾಗಿ ಆದ್ಯತೆ ಮೇರೆಗೆ ಗ್ರಾಮೀಣ ಪ್ರದೇಶಗಳಲ್ಲಿನ ಖಾಲಿ ಹುದ್ದೆಗಳಿಗೆ ಹಾಗೂ ಶಿಕ್ಷಕರ ರಹಿತ ಶಾಲೆಗಳಿಗೆ/ ಹೆಚ್ಚು ವಿದ್ಯಾರ್ಥಿಗಳಿರುವ ಶಾಲೆಯ ಖಾಲಿ ಹುದ್ದೆಗಳಿಗೆ ಮೊದಲ ಆದ್ಯತೆ ನೀಡುವುದು.
4. ಅತಿಥಿ ಶಿಕ್ಷಕರನ್ನು ಆಯಾ ಹುದ್ದೆಗೆ ನಿಗದಿಪಡಿಸಿದ ಕನಿಷ್ಠ ವಿದ್ಯಾರ್ಹತೆಯನ್ನು ಪರಿಗಣಿಸಿ ಮೆರಿಟ್ ಆಧಾರದಲ್ಲಿ ಆಯ್ಕೆ ಮಾಡತಕ್ಕದ್ದು.

Scanned with CamScanner

Scanned with CamScanner

5. ಅತಿಥಿ ಶಿಕ್ಷಕರ ಹಾಜರಾತಿ ವಹಿಯನ್ನು ಪ್ರತ್ಯೇಕವಾಗಿ ನಿರ್ವಹಿಸುವುದು.
6. ಪ್ರಾಥಮಿಕ ಶಾಲಾ ಅತಿಥಿ ಶಿಕ್ಷಕರ ಗೌರವ ಸಂಭಾವನೆ ದರ ಮಾಹೆಯಾನ ರೂ 7500/- ಆಗಿರುತ್ತದೆ.

ನೇಮಕಗೊಂಡ ತಾಲ್ಲೂಕುವಾರು ಅತಿಥಿ ಶಿಕ್ಷಕರ ಮಾಹಿತಿಯನ್ನು ಕ್ರೂಢೀಕರಿಸಿ ಜಿಲ್ಲೆಯಿಂದ ಅನುದಾನ ಬೇಡಿಕೆ/ವಿವರಗಳನ್ನು ಸಲ್ಲಿಸುವುದು. ತಾಲ್ಲೂಕುವಾರು ಬೇಡಿಕೆಯನ್ವಾಧರಿಸಿ ತಾಲ್ಲೂಕು ಪಂಚಾಯತ್‌ಗಳಿಗೆ ನೇರವಾಗಿ ಆರ್ಥಿಕ ಇಲಾಖೆಯಿಂದ ಬಿಡುಡೆಯಾಗುತ್ತದೆ.

ಮೇಲಿನ ಎಲ್ಲಾ ಷರತ್ತುಗಳನ್ನು ಚಾಚು ತಪ್ಪದೇ ಪಾಲಿಸಲು ಸಂಬಂಧಿಸಿದ ಉಪನಿರ್ದೇಶಕರು/ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಂಬಂಧಿತ ಪ್ರಾಥಮಿಕ ಶಾಲೆಗಳ ಮುಖ್ಯ ಶಿಕ್ಷಕರಿಗೆ ಕಡ್ಡಾಯವಾಗಿ ಸೂಚಿಸಲು ಈ ಮೂಲಕ ತಿಳಿಸಿದೆ.

ಮೇಲ್ಕಂಡ ವಿಷಯದಲ್ಲಿ ಯಾವುದೇ ಲೋಪದೋಷಗಳಾದಲ್ಲಿ ಸಂಬಂಧಿಸಿದ ಅಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಿ ಶಿಸ್ತು ಕ್ರಮಕ್ಕೆ ಒಳಪಡಿಸಲಾಗುವುದು. ಆಯ್ಕೆ ಮಾಡಿಕೊಂಡ ಅತಿಥಿ ಶಿಕ್ಷಕರ ಗೌರವ ಸಂಭಾವನೆ ಪಾವತಿಸಲು ತಾಲ್ಲೂಕು/ವಲಯವಾರು ವಿವರಗಳನ್ನು ಜಿಲ್ಲಾ ಉಪನಿರ್ದೇಶಕರು ಕ್ರೂಢೀಕರಿಸಿ, ತಾಲ್ಲೂಕುವಾರು ಅಗತ್ಯವಿರುವ ಅನುದಾನ ಬೇಡಿಕೆ ಸಹಿತ ದೃಢೀಕೃತ ವರದಿಯನ್ನು ದಿನಾಂಕ 31/05/2022 ರೊಳಗಾಗಿ ಕೆಳಗಿನ ನಮೂನೆಯಲ್ಲಿ ಇ-ಮೇಲ್ primarydpi@gmail.com ಮುಖಾಂತರ ಈ ಕಛೇರಿಗೆ ಸಲ್ಲಿಸುವುದು.

ಜಿಲ್ಲೆಯ ಹೆಸರು : ಜಿಲ್ಲೆಗೆ ಹಂಚಿಕೆ ಮಾಡಿರುವ ಒಟ್ಟು ಅತಿಥಿ ಶಿಕ್ಷಕರ ಸಂಖ್ಯೆ :

| ಕ್ರಮ ಸಂಖ್ಯೆ | ತಾಲ್ಲೂಕಿನ ಹೆಸರು | ಹಂಚಿಕೆ ಮಾಡಲಾದ ಅತಿಥಿ ಶಿಕ್ಷಕರ ಸಂಖ್ಯೆ | ನೇಮಕಗೊಂಡ ಅತಿಥಿ ಶಿಕ್ಷಕರ ಸಂಖ್ಯೆ | ಅಗತ್ಯವಿರುವ ಅನುದಾನ ವಿವರ |
|---|---|---|---|---|
| | | | | |

(ಡಾ. ವಿಶಾಲ್ ಆರ್)
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

ಗೆ,
1. **ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ (ಆಡಳಿತ),**
2. **ರಾಜ್ಯದ ಎಲ್ಲಾ ಜಿಲ್ಲೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ (ಜಿಲ್ಲಾ ಉಪನಿರ್ದೇಶಕ ಮೂಲಕ)**

**ಪ್ರತಿಯನ್ನು:-**
1. ಆಪ್ತ ಕಾರ್ಯದರ್ಶಿಗಳು, ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರ ಕಛೇರಿ, ವಿಧಾನ ಸೌಧ, ಬೆಂಗಳೂರು ಇವರಿಗೆ ಸಲ್ಲಿಸುತ್ತಾ, ಮಾನ್ಯ ಸಚಿವರ ಅವಗಾಹನೆಗೆ ತರಲು ಕೋರಿದೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ, ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.
3. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
4. ಅಪರ ಆಯುಕ್ತರು, ಗುಲ್ಬರ್ಗಾ/ ಧಾರವಾಡ, ಇವರ ಮಾಹಿತಿ ಹಾಗು ಅಗತ್ಯ ಕ್ರಮಕ್ಕಾಗಿ.
5. ಮಾನ್ಯ ಆಯುಕ್ತರ ಆಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ
6. ಹಿರಿಯ ಸಹಾಯಕ ನಿರ್ದೇಶಕರು (ಇ-ಆಡಳಿತ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಇಲಾಖಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲು

Scanned with CamScanner
Scanned with CamScanner

| 2022-23 ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ಎದುರಾಗಿ ತಾತ್ಕಾಲಿಕವಾಗಿ ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲು ಹಂಚಿಕೆ ಮಾಡಲಾದ ಜಿಲ್ಲಾವಾರು ಹುದ್ದೆಗಳ ವಿವರ | | |
|---|---|---|
| ಕ್ರಮ ಸಂಖ್ಯೆ | ಜಿಲ್ಲೆಯ ಹೆಸರು | ಹಂಚಿಕೆ ಮಾಡಲಾದ ಹುದ್ದೆಗಳು |
| 1. | ಬೆಂಗಳೂರು ಉತ್ತರ | 139 |
| 2. | ಬೆಂಗಳೂರು ದಕ್ಷಿಣ | 230 |
| 3. | ಬೆಂಗಳೂರು ಗ್ರಾಮಾಂತರ | 232 |
| 4. | ಕೋಲಾರ | 251 |
| 5. | ಚಿಕ್ಕಬಳ್ಳಾಪುರ | 337 |
| 6. | ತುಮಕೂರು | 444 |
| 7. | ಮಧುಗಿರಿ | 301 |
| 8. | ಚಿತ್ರದುರ್ಗ | 499 |
| 9. | ದಾವಣಗೆರೆ | 154 |
| 10. | ಶಿವಮೊಗ್ಗ | 681 |
| 11. | ರಾಮನಗರ | 264 |
| 12. | ಮೈಸೂರು | 679 |
| 13. | ಚಾಮರಾಜನಗರ | 343 |
| 14. | ಮಂಡ್ಯ | 683 |
| 15. | ಹಾಸನ | 302 |
| 16. | ಚಿಕ್ಕಮಗಳೂರು | 188 |
| 17. | ಕೊಡುಗು | 156 |
| 18. | ದಕ್ಷಿಣ ಕನ್ನಡ | 764 |
| 19. | ಉಡುಪಿ | 310 |
| 20. | ಬೆಳಗಾಂ | 986 |
| 21. | ಚಿಕ್ಕೋಡಿ | 1355 |
| 22. | ಉತ್ತರ ಕನ್ನಡ | 209 |
| 23. | ಸಿರ್ಸಿ | 606 |
| 24. | ಗದಗ್ | 333 |
| 25. | ಧಾರವಾಡ | 389 |
| 26. | ವಿಜಯಪುರ | 1157 |
| 27. | ಹಾವೇರಿ | 511 |
| 28. | ಗುಲ್ಬರ್ಗಾ | 1743 |
| 29. | ಯಾದಗಿರಿ | 1623 |
| 30. | ಬಳ್ಳಾರಿ | 994 |
| 31. | ರಾಯಚೂರು | 1833 |
| 32. | ಕೊಪ್ಪಳ | 977 |
| 33 | ವಿಜಯನಗರ | 774 |
| 34 | ಬೀದರ್ | 570 |
| 35 | ಬಾಗಲಕೋಟೆ | 987 |
| ಒಟ್ಟು | | 22000 |

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

Scanned with CamScanner

Scanned with CamScanner